**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಸಿಎಸ್(2)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:11-07-2018

**ಸುತ್ತೋಲೆ**

ವಿಷಯ: 2018 ರ ಮೇ/ಜೂನ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಘೋಟೋ ಪ್ರತಿ/ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಿರುವ ಕುರಿತು.

ಉಲ್ಲೇಖ:ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಸಿಎಸ್(2)/2018 ದಿ:10-07-2018

*******

ಮೇಲ್ಕಂಡ ವಿಷಯ ಸಂಬಂಧಿಸಿದಂತೆ, ವಿದ್ಯಾರ್ಥಿಗಳು 2018 ರ ಮೇ/ಜೂನ್ ತಿಂಗಳನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಘೋಟೋ ಪ್ರತಿ ಪಡೆಯಲು ಮತ್ತು ಮರು ಮೌಲ್ಯಮಾಪನಕ್ಕಾಗಿ ಶುಲ್ಕ ಪಾವತಿಸಿ ಅರ್ಜಿ ಸಲ್ಲಿಸುವ ಅವಧಿಯನ್ನು ಅವರ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ದಿನಾಂಕ:12-07-2018 ರವರೆಗೆ ವಿಸ್ತರಿಸಲಾಗಿದೆ.

ಸಂಸ್ಥೆಗಳು ಸದರಿ ವಿದ್ಯಾರ್ಥಿಗಳ ಅರ್ಜಿಗಳಲ್ಲಿನ ವಿವರಗಳನ್ನು ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿ **ದಿನಾಂಕ: 12-07-2018 ರ ಸಂಜೆ 5.30 ಗಂಟೆಯೊಳಗೆ** ಈ ಕಚೇರಿಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆಯ ಮುಖಾಂತರ ಸಲ್ಲಿಸಲು ತಿಳಿಸಲಾಗಿದೆ. ನಂತರ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿ/ಪೋಷಕರ ಗಮನಕ್ಕೆ ತಪ್ಪದೇ ತರಲು ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ

**ಇವರಿಗೆ,**

ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

2) ಗಣಕ ಕೇಂದ್ರ – ವೆಬ್‌ಪೋರ್ಟಲ್/ www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

3) ಕಾರ್ಯದರ್ಶಿಯವರು ಆಪ್ತ ಶಾಖೆ